ಕರ್ನಾಟಕ ಸರ್ಕಾರ
ಸಹಕಾರ ಚುನಾವಣಾ ಪ್ರಾಧಿಕಾರ

**ವಿಷಯ:–** 2015ನೇ ಸಾಲಿನಲ್ಲಿ ಪದಾವಧಿ ಮುಗಿಯಲಿರುವ ಅಪೆಕ್ಸ್ ಸಹಕಾರ ಸಂಘಗಳ/ಸಹಕಾರಿಗಳ ಆಡಳಿತ ಮಂಡಲಿ ಹಾಗೂ ಪದಾಧಿಕಾರಿಗಳ ಚುನಾವಣೆ ನಡೆಸುವ ಸಂಬಂಧ ನೋಡಲ್ ಅಧಿಕಾರಿಯನ್ನು ನೇಮಕ ಮಾಡುವ ಬಗ್ಗೆ.

**ಉಲ್ಲೇಖ:–**
01. ಪ್ರಾಧಿಕಾರದ ಅಧಿಸೂಚನೆ ಸಂಖ್ಯೆ : ಸ.ಚು.ಪ್ರಾ/ ಆಡಳಿತ/ ಚುನಾವಣೆ/ 96/2014-15 ದಿನಾಂಕ : 05.03.2015
02. ಅಪೆಕ್ಸ್ ಸಹಕಾರ ಸಂಘಗಳ / ಸಹಕಾರಿಗಳ ಚುನಾವಣೆ ನಡೆಸಲು ಜಿಲ್ಲಾ ಚುನಾವಣಾಧಿಕಾರಿಗಳನ್ನು ನೇಮಕ ಮಾಡುವ ಬಗ್ಗೆ ಪ್ರಾಧಿಕಾರದ ಆದೇಶ ಸಂಖ್ಯೆ : ಸಚುಪ್ರಾ/ಚುನಾವಣೆ/ಜಿ.ಚು.ಅ/ ಅಪೆಕ್ಸ್/104/2014 ದಿನಾಂಕ : 05.03.2015.

★★★★★

**ಪ್ರಸ್ತಾವನೆ:–**

ಕರ್ನಾಟಕ ಸಹಕಾರ ಸಂಘಗಳ ಅಧಿನಿಯಮ, 1959ರ (ಸಂಕ್ಷಿಪ್ತವಾಗಿ 'ಅಧಿನಿಯಮ') ಪ್ರಕರಣ 39–ಎ ಹಾಗೂ ಪ್ರಕರಣ 39–ಎಎ ದ ಅವಕಾಶದಂತೆ ಯಾವುದೇ ಕರ್ನಾಟಕ ಸೌಹಾರ್ದ ಸಹಕಾರಿ ಅಧಿನಿಯಮ 1997ರ ಪ್ರಕರಣ–26 ಮತ್ತು 26–ಎ ರಂತೆ ಆಕಸ್ಮಿಕ ಖಾಲಿ ಸ್ಥಾನವನ್ನು ಒಳಗೊಂಡಂತೆ ಸಹಕಾರ ಸಂಘದ ಮಂಡಲಿಯ ಸದಸ್ಯರ ಪ್ರತಿಯೊಂದು ಸಾಮಾನ್ಯ ಚುನಾವಣೆಯನ್ನು ಮತ್ತು ಪದಾಧಿಕಾರಿಗಳ ಚುನಾವಣೆಯನ್ನು ಸಹಕಾರ ಚುನಾವಣಾ ಪ್ರಾಧಿಕಾರದ ಅಧೀಕ್ಷಣೆಗೆ ಒಳಪಟ್ಟು ನಡೆಸತಕ್ಕದ್ದಾಗಿದೆ. ಮೇಲೆ ತಿಳಿಸಿದಂತೆ ಸಹಕಾರ ಸಂಘದ / ಸಹಕಾರಿಗಳ ಮಂಡಲಿ ಚುನಾವಣೆಗಳನ್ನು / ಪದಾಧಿಕಾರಿಗಳ ಚುನಾವಣೆಗಳನ್ನು ಸದರಿ ಅಧಿನಿಯಮ / ನಿಯಮಗಳು ಹಾಗೂ ಸಂಘಗಳ ಉಪವಿಧಿಗಳನ್ನು ಗಮನದಲ್ಲಿಟ್ಟುಕೊಂಡು ಕಾನೂನಿಗೆ ಅನುಗುಣವಾಗಿ ನಡೆಸತಕ್ಕದ್ದಾಗಿದೆ. 2015ನೇ ಸಾಲಿನಲ್ಲಿ ಪದಾವಧಿ ಮುಗಿಯಲಿರುವ ಅಪೆಕ್ಸ್ ಸಹಕಾರ ಸಂಘಗಳ / ಸಹಕಾರಿಗಳ ಮಂಡಲಿ ಚುನಾವಣೆಗಳು ಮತ್ತು ತತ್ಪರಿಣಾಮದ ಪದಾಧಿಕಾರಿಗಳ ಚುನಾವಣೆಗಳನ್ನು ಅಧಿನಿಯಮ ಪ್ರಕರಣ 39ಎ ಅವಕಾಶದಂತೆ ನಡೆಸುವ ಸಂಬಂಧ ಪ್ರಾಧಿಕಾರ ಅಗತ್ಯ ಕ್ರಮ ಕೈಗೊಂಡಿರುತ್ತದೆ. 2015ನೇ ಸಾಲಿನಲ್ಲಿ ಅಂತ್ಯಕ್ಕೆ ಮಂಡಲಿಯ ಪದಾವಧಿ ಮುಕ್ತಾಯವಾಗುವ ಅಪೆಕ್ಸ್ ಸಹಕಾರ ಸಂಘಗಳಿಗೆ/ಸಹಕಾರಿಗಳಿಗೆ ಸಂಬಂಧಿಸಿದಂತೆ ಮಂಡಲಿ ಸದಸ್ಯರ ಸಾಮಾನ್ಯ ಚುನಾವಣೆ ಮತ್ತು ತತ್ಪರಿಣಾಮ ಪದಾಧಿಕಾರಿಗಳ ಚುನಾವಣೆಗಳನ್ನು ನಡೆಸುವ ಬಗ್ಗೆ ಮತದಾರರ ಪಟ್ಟಿಯ ತಯಾರಿಕೆಗಾಗಿ ಮತ್ತು ಚುನಾವಣೆಗಳನ್ನು ನಡೆಸುವುದಕ್ಕಾಗಿ ಪೂರ್ವಸಿದ್ಧತಾ ಕಾರ್ಯವನ್ನು ಪ್ರಾರಂಭಿಸಲಾಗಿದೆ. ಈ ಸಂಬಂಧವಾಗಿ ಉಲ್ಲೇಖ(1)ರಂತೆ ಮಾಧ್ಯಮಿಕ / ಫೆಡರಲ್ ಮತ್ತು ಅಪೆಕ್ಸ್ ಸಹಕಾರ ಸಂಘಗಳ ಚುನಾವಣಾ ದಿನಾಂಕವನ್ನು ನಿಗದಿಗೊಳಿಸಿ ಪ್ರಾಧಿಕಾರದಿಂದ ಈಗಾಗಲೇ ಅಧಿಸೂಚನೆಯನ್ನು ಹೊರಡಿಸಲಾಗಿದೆ.

ಕರ್ನಾಟಕ ಸಹಕಾರ ಸಂಘಗಳ (ತಿದ್ದುಪಡಿ) ನಿಯಮಗಳು, 2013 ರ ನಿಯಮ 13ಡಿ ಮತ್ತು ಕರ್ನಾಟಕ ಸೌಹಾರ್ದ ಸಹಕಾರಿ ನಿಯಮಗಳು 2004ರ ನಿಯಮ–5–ಬಿ ದ ಅವಕಾಶದಂತೆ ಉಲ್ಲೇಖ(2)ರಂತೆ ಅಪೆಕ್ಸ್ ಸಹಕಾರ ಸಂಘಗಳ / ಸಹಕಾರಿಗಳ ಚುನಾವಣೆ ಮತ್ತು ತತ್ಪರಿಣಾಮದ ಪದಾಧಿಕಾರಿಗಳ ಚುನಾವಣೆಯನ್ನು ನಡೆಸಲು ಪ್ರಾದೇಶಿಕ ಆಯುಕ್ತರು, ಬೆಂಗಳೂರು ಮತ್ತು ಪ್ರಾದೇಶಿಕ ಆಯುಕ್ತರು, ಮೈಸೂರು ಇವರುಗಳನ್ನು ಜಿಲ್ಲಾ ಚುನಾವಣಾಧಿಕಾರಿಗಳನ್ನಾಗಿ ನೇಮಕ ಮಾಡಿ ಆದೇಶಿಸಲಾಗಿರುತ್ತದೆ.

ಅಲ್ಲದೆ, ಅಪೆಕ್ಸ್ ಸಹಕಾರ ಸಂಘಗಳ / ಸಹಕಾರಿಗಳ ಚುನಾವಣೆ ಮತ್ತು ತತ್ಪರಿಣಾಮದ ಪದಾಧಿಕಾರಿಗಳ ಚುನಾವಣೆ ನಡೆಸಲು ರಿಟರ್ನಿಂಗ್ ಅಧಿಕಾರಿಗಳನ್ನು ನೇಮಕ ಮಾಡುವ ಕಾರ್ಯವು ಪ್ರಗತಿಯಲ್ಲಿದ್ದು ಚುನಾವಣೆಗಳು ಸುಗಮವಾಗಿ, ನ್ಯಾಯಸಮ್ಮತವಾಗಿ ಮತ್ತು ನಿಯಮಾನುಸಾರ ಜರುಗಲು ಅನುಕೂಲವಾಗುವಂತೆ ಒಬ್ಬರು ನೋಡಲ್ ಅಧಿಕಾರಿಯನ್ನು ನೇಮಕ ಮಾಡುವುದು ಸೂಕ್ತವೆಂದು ಪ್ರಾಧಿಕಾರವು ಮನಗಂಡು ಈ ಮೇಲ್ಕಂಡ ಹಿನ್ನಲೆಯಲ್ಲಿ ಕೆಳಕಂಡ ಆದೇಶವನ್ನು ಹೊರಡಿಸಲಾಗಿದೆ

**-:ಆದೇಶ:-**

**ಸಚುಪ್ರಾ/ಚುನಾವಣೆ/ನೋಡಲ್/ಅಪೆಕ್ಸ್/30/2014** **ದಿನಾಂಕ: 30.03.2015**

ಪ್ರಸ್ತಾವನೆಯಲ್ಲಿ ವಿವರಿಸಲಾದಂತೆ ಸಹಕಾರ ಚುನಾವಣಾ ಪ್ರಾಧಿಕಾರಕ್ಕೆ ದತ್ತವಾಗಿರುವ ಅಧಿಕಾರವನ್ನು ಚಲಾಯಿಸಿ ಎನ್.ಸಿ. ಮುನಿಯಪ್ಪ, ಸಹಕಾರ ಚುನಾವಣಾ ಪ್ರಾಧಿಕಾರದ ಆಯುಕ್ತನಾದ ನಾನು 2015ನೇ ಸಾಲಿನಲ್ಲಿ ಚುನಾವಣೆಗೆ ಬಾಕಿ ಇರುವ ಅಪೆಕ್ಸ್ ಸಹಕಾರ ಸಂಘಗಳು / ಸಹಕಾರಿಗಳ ಚುನಾವಣೆ ಮತ್ತು ತತ್ಪರಿಣಾಮದ ಪದಾಧಿಕಾರಿಗಳ ಚುನಾವಣೆಗಳನ್ನು ಜಿಲ್ಲಾಚುನಾವಣಾಧಿಕಾರಿ/ರಿಟರ್ನಿಂಗ್ ಆಫೀಸರ್‌ಗಳು ನಿಯಮಾನುಸಾರ ಪಾರದರ್ಶಕವಾಗಿ ನಡೆಸುವ ಬಗ್ಗೆ ಪ್ರಾಧಿಕಾರದಿಂದ ಕಾಲಕಾಲಕ್ಕೆ ನೀಡಲಾದ ನಿರ್ದೇಶನ, ಮಾರ್ಗಸೂಚಿ ಹಾಗೂ ಸಹಕಾರ ಸಂಘಗಳ ಅಧಿನಿಯಮ ಮತ್ತು ನಿಯಮಗಳು ಹಾಗೂ ಸಂಘಗಳ ಬೈಲಾ ಅವಕಾಶಗಳಂತೆ ನಡೆಸುವ ಬಗ್ಗೆ ಅಗತ್ಯ ಕ್ರಮ ಕೈಗೊಂಡು ನಿಯಮಾನುಸಾರ ಚುನಾವಣೆ ನಡೆಸಲು ಬೇಕಾಗುವ ಅಗತ್ಯ ದಾಖಲಾತಿಗಳನ್ನು ಸರಿಯಾದ ಮತದಾರರ ಪಟ್ಟಿಯನ್ನು ಮುಖ್ಯಕಾರ್ಯನಿರ್ವಹಣಾಧಿಕಾರಿ ಒದಗಿಸುವ ಬಗ್ಗೆ ಅಗತ್ಯ ಕ್ರಮಕೈಗೊಂಡು ಚುನಾವಣೆಗಳು ಸುಲಲಿತವಾಗಿ ಜರುಗುವಂತೆ ಕಾರ್ಯನಿರ್ವಹಿಸಲು **ಶ್ರೀ ಡಿ.ಸಿ.ದೇವರಾಜ್, ಸಹಕಾರ ಸಂಘಗಳ ಜಂಟಿನಿಬಂಧಕರು, ಸಹಕಾರ ಚುನಾವಣಾ ಪ್ರಾಧಿಕಾರ, ಬೆಂಗಳೂರು ಇವರನ್ನು ಅಪೆಕ್ಸ್ ಸಂಘಗಳ / ಸಹಕಾರಿಗಳ ಮಂಡಲಿಗಳ ಚುನಾವಣೆ ಮತ್ತು ತತ್ಪರಿಣಾಮದ ಪದಾಧಿಕಾರಿಗಳ ಚುನಾವಣೆಗಳಿಗೆ ಸಂಬಂಧಿಸಿದಂತೆ ನೋಡಲ್ ಅಧಿಕಾರಿಯಾಗಿ ನೇಮಕ ಮಾಡಿ ಆದೇಶಿಸಲಾಗಿದೆ.**

(ಎನ್.ಸಿ.ಮುನಿಯಪ್ಪ)
**ಆಯುಕ್ತರು,**
**ಸಹಕಾರ ಚುನಾವಣಾ ಪ್ರಾಧಿಕಾರ,**
**ಬೆಂಗಳೂರು.**

**ಗೆ,**

**ಪ್ರಾದೇಶಿಕ ಆಯುಕ್ತರು** (Regional Commissioners)

.................................................. **ಹಾಗೂ ಅಪೆಕ್ಸ್ ಸಂಘಗಳ / ಸಹಕಾರಿಗಳ**

**ಜಿಲ್ಲಾ ಚುನಾವಣಾಧಿಕಾರಿಗಳು**

**ಪ್ರತಿಗಳು:-**

1. ಮಾನ್ಯ ಸರ್ಕಾರದ ಕಾರ್ಯದರ್ಶಿ, ಸಹಕಾರ ಇಲಾಖೆ, 6ನೇ ಅಂತಸ್ತು, ಬಹುಮಹಡಿ ಕಟ್ಟಡ, ಬೆಂಗಳೂರು-01.
2. ಸಹಕಾರ ಸಂಘಗಳ ನಿಬಂಧಕರು, ನಂ.1 ಅಲಿ ಆಸ್ಕರ್ ರಸ್ತೆ, ಬೆಂಗಳೂರು- 560052
3. ಸಹಕಾರ ಸಂಘಗಳ ಅಪರ ನಿಬಂಧಕರು, (ಪತ್ತು), (ಕೈಗಾರಿಕೆ ಮತ್ತು ಹೈನುಗಾರಿಕೆ) (ವಸತಿ ಮತ್ತು ಇತರೆ), (ಬಳಕೆ ಮತ್ತು ಮಾರಾಟ), ಸಹಕಾರ ಸಂಘಗಳ ನಿಬಂಧಕರ ಕಛೇರಿ, ಬೆಂಗಳೂರು.

--3

4. ಸಹಕಾರ ಸಂಘಗಳ ಜಂಟಿ ನಿಬಂಧಕರು, (ಆಡಳಿತ ಮತ್ತು ಅಭಿವೃದ್ಧಿ), (ಪಟ್ಟಣ ಬ್ಯಾಂಕುಗಳು), (ಐಸಿಡಿಪಿ), (ಕಾನೂನುಕೋಶ), ಕೇಂದ್ರ ಕಛೇರಿ, ಬೆಂಗಳೂರು.
5. ಎಲ್ಲಾ ಪ್ರಾಂತೀಯ ಸಹಕಾರ ಸಂಘಗಳ ಜಂಟಿ ನಿಬಂಧಕರುಗಳಿಗೆ
6. ಎಲ್ಲಾ ಜಿಲ್ಲೆಗಳ ಸಹಕಾರ ಸಂಘಗಳ ಉಪ ನಿಬಂಧಕರುಗಳಿಗೆ.
7. ಸಹಕಾರ ಚುನಾವಣಾ ಪ್ರಾಧಿಕಾರ, ಬೆಂಗಳೂರು ಇದರ ಜಂಟಿನಿಬಂಧಕರು / ಉಪಕಾರ್ಯದರ್ಶಿ / ಉಪನಿಬಂಧಕರು / ಸಹಕಾರ ಸಂಘಗಳ ಸಹಾಯಕ ನಿಬಂಧಕರು, ಬೆಂಗಳೂರು ಪ್ರಾಂತ / ಬೆಳಗಾವಿ ಪ್ರಾಂತ / ಕಲಬುರ್ಗಿ ಪ್ರಾಂತ / ಮೈಸೂರು ಪ್ರಾಂತ.

**ಸಂಬಂಧಿಸಿದ ಈ ಕೆಳಕಂಡ ಅಪೆಕ್ಸ್ ಸಹಕಾರ ಸಂಘಗಳ ಮುಖ್ಯಕಾರ್ಯನಿರ್ವಹಣಾಧಿಕಾರಿಗಳಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ:-**

1. ಕರ್ನಾಟಕ ರಾಜ್ಯ ಸಹಕಾರಿ ಅಪೆಕ್ಸ್ ಬ್ಯಾಂಕ್ ನಿ., ಚಾಮರಾಜಪೇಟೆ, ಬೆಂಗಳೂರು.
2. ಕರ್ನಾಟಕ ರಾಜ್ಯ ಸಹಕಾರ ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಬ್ಯಾಂಕ್ ನಿ., ಚಾಮರಾಜಪೇಟೆ, ಬೆಂಗಳೂರು.
3. ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾಮಂಡಳ ನಿ., ಕನ್ನಿಂಗ್‌ಹ್ಯಾಮ್ ರಸ್ತೆ, ಬೆಂಗಳೂರು.
4. ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ನಿಯಮಿತ, ಡಿ.ದೇವರಾಜಅರಸ್ ರಸ್ತೆ, ಬೆಂಗಳೂರು.
5. ಕರ್ನಾಟಕ ರಾಜ್ಯ ಪಟ್ಟಣ ಸಹಕಾರ ಬ್ಯಾಂಕುಗಳ ಮಹಾಮಂಡಳ ನಿ., ಕೆ.ಹೆಚ್. ರಸ್ತೆ, ಬೆಂಗಳೂರು.
6. ಕರ್ನಾಟಕ ರಾಜ್ಯ ಸಹಕಾರ ಸಕ್ಕರೆ ಕಾರ್ಖಾನೆಗಳ ಮಹಾಮಂಡಳ ನಿಯಮಿತ, ಮಲ್ಲೇಶ್ವರಂ, ಬೆಂಗಳೂರು.
7. ಕರ್ನಾಟಕ ರಾಜ್ಯ ಸಹಕಾರ ಕೈಗಾರಿಕಾ ಮಹಾಮಂಡಳ ನಿಯಮಿತ, ಕೆ.ಹೆಚ್.ರಸ್ತೆ, ಬೆಂಗಳೂರು.
8. ಕರ್ನಾಟಕ ರಾಜ್ಯ ತೋಟಗಾರಿಕಾ ಮಹಾಮಂಡಳ ನಿಯಮಿತ, ಬಿನ್ನಿಮಿಲ್ ರಸ್ತೆ, ಬೆಂಗಳೂರು.
9. ಕರ್ನಾಟಕ ರಾಜ್ಯ ಸಹಕಾರ ಮಹಿಳಾ ಮಹಾ ಮಂಡಳ ನಿಯಮಿತ, ಡಿ.ದೇವರಾಜಅರಸ್‌ರಸ್ತೆ, ಬೆಂಗಳೂರು.
10. ಕರ್ನಾಟಕ ರಾಜ್ಯ ಸಹಕಾರ ತೆಂಗಿನ ನಾರಿನ ಮಹಾಮಂಡಳ ನಿಯಮಿತ, ರಾಜಾಜಿನಗರ, ಬೆಂಗಳೂರು.
11. ಕರ್ನಾಟಕ ರಾಜ್ಯ ಸಹಕಾರ ಕುಕ್ಕುಟ ಮಹಾಮಂಡಳ ನಿಯಮಿತ, ದಂಡುಪ್ರದೇಶ, ಬೆಂಗಳೂರು.
12. ಕರ್ನಾಟಕ ರಾಜ್ಯ ಸಹಕಾರ ರೇಷ್ಮೆ ಮಾರಾಟ ಮಹಾಮಂಡಳ ನಿ., ಅವಿನ್ಯೂರಸ್ತೆ, ಬೆಂಗಳೂರು.
13. ಕರ್ನಾಟಕ ರಾಜ್ಯ ಸಹಕಾರ ಚಲನಚಿತ್ರ ಮತ್ತು ಲಲಿತಕಲಾ ಮಹಾಮಂಡಳಿ ನಿ., ಡಿ.ದೇವರಾಜ್ ಅರಸ್ ರಸ್ತೆ, ಬೆಂಗಳೂರು.
14. ಕರ್ನಾಟಕ ರಾಜ್ಯ ಕೈಗಾರಿಕಾ ಸರಬರಾಜು ಮತ್ತು ಮಾರಾಟ ಸಹಕಾರ ಮಹಾಮಂಡಳಿ ನಿ., ಒಕ್ಕಲಿಗರ ಭವನ, ಬೆಂಗಳೂರು.
15. ಕರ್ನಾಟಕ ರಾಜ್ಯ ಸಹಕಾರ ಲ್ಯಾಂಪ್ಸ್ ಮಹಾ ಮಂಡಳ ನಿಯಮಿತ, ಜೋಡಿಚಾಮರಾಜ ರಸ್ತೆ, ಮೈಸೂರು.
16. ಕರ್ನಾಟಕ ರಾಜ್ಯ ದರ್ಜಿಗಳ ಸಹಕಾರ ಮಹಾಮಂಡಳ ನಿಯಮಿತ, ನಂ.69, ನೆಹರುನಗರ, ಸುಬೇದಾರ್ ಛತ್ರಂ ರಸ್ತೆ, ಶೇಷಾದ್ರಿಪುರಂ, ಬೆಂಗಳೂರು.
17. ಕರ್ನಾಟಕ ರಾಜ್ಯ ಉಣ್ಣೆ ಕೈಮಗ್ಗದ ನೇಕಾರರ ಖಾದಿಯೇತರ ಸಹಕಾರ ಸಂಘಗಳ ಮಹಾಮಂಡಳ ನಿಯಮಿತ, ಚಳ್ಳಕೆರೆ, ಚಿತ್ರದುರ್ಗ ಜಿಲ್ಲೆ.

7. ಕಛೇರಿ ಆದೇಶ /ರಕ್ಷಾ ಕಡತ.